ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ. ಎಂ. ಎಫ್.ಸಿ., ನ್ಯಾಯಾಲಯ ಚನ್ನಪಟ್ಟಣ

ಚನ್ನಪಟ್ಟಣ.

CC No. 173/2017

CW-3 PW-3

| | |
|---|---|
| ಹೆಸರು | ಃ ಲಕ್ಷ್ಮಣ ಬಿ ಕೆ |
| ಗಂಡನ ಹೆಸರು/ತಂದೆಯ ಹೆಸರು | ಃ ಕೆಂಪಣ್ಣ |
| ವಯಸ್ಸು | ಃ 38 ವರ್ಷ |
| ಉದ್ಯೋಗ | ಃ ವ್ಯವಸಾಯ |
| ವಾಸ | ಃ ಕುಡಿಕೆ ಬೇವೂರು. |

**ದಿನಾಂಕ 08.08.2023 ರಂದು ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ**

ನನಗೆ ಆರೋಪಿತರು ಗೊತ್ತು. ಚಾಸಾ1 ಮತ್ತು 2 ರವರ ಪರಿಚಯವಿರುತ್ತದೆ. ಸುಮಾರು 7 ವರ್ಷಗಳ ಹಿಂದೆ ರಾತ್ರಿ 8.00-8.30 ಗಂಟೆಯ ಸಮಯದಲ್ಲಿ ನಾನು ಹಾಗೂ ನನ್ನ ಸ್ನೇಹಿತರು ನಮ್ಮ ಗ್ರಾಮದ ದೇವಸ್ಥಾನದ ಹತ್ತಿರ ಕುಳಿತ್ತಿದ್ದಾಗ ಆ ಸಮಯದಲ್ಲಿ ಎಂ ಕೆ ದೊಡ್ಡಿ ಪೋಲಿಸ್ ಠಾಣಾ ಸಿಬ್ಬಂದಿರವರು ಬಂದು ನನ್ನ ಸಹಿಯನ್ನು ಪಡೆದಿರುತ್ತಾರೆ ಆದರೆ ಸದರಿ ಪ್ರಕರಣದ ಬಗ್ಗೆ ನನಗೆ ಗೊತ್ತಿಲ್ಲ. ಆರೋಪಿತರು ಮತ್ತು ಗಾಯಾಳುವಿನ ನಡುವೆ ಆದ ಗಲಾಟೆಯ ಬಗ್ಗೆ ನನಗೆ ಗೊತ್ತಿಲ್ಲ. ನಾನು ತನಿಖಾಧಿಕಾರಿಗಳ ಮುಂದೆ ಯಾವುದೇ ಹೇಳಿಕೆಯನ್ನು ನೀಡಿಲ್ಲ. ನ್ಯಾಯಾಲಯದ ಮುಂದೆ ಇರುವ ದೊಣ್ಣೆಯನ್ನು ಮತ್ತು ಕಬ್ಬಿಣದ ಪೈಪನ್ನು

ನೋಡಿದರೆ ಗುರುತಿಸಲಾಗುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿದ್ದಾರೆ, ಅನುಮತಿಸಲಾಯಿತು).**

**ಪಾಟೀ ಸವಾಲುಃ ಎಪಿಪಿಯವರಿಂದಃ**

ದಿನಾಂಕ 07.11.2016 ರಂದು ಬೆಳಗ್ಗೆ 6.00 ಗಂಟೆಯ ಸಮಯದಲ್ಲಿ "ನಾನು ಚಾಸಾ-2 ರವರಿಗೆ ಬೋರ್ ವೆಲ್ ನೀರು ಬಿಟ್ಟು ಕೋ ಎಂದು ಹೇಳಲು ಅವರ ಮನೆಯ ಹತ್ತಿರ ಹೋಗಿದ್ದಾಗ ----------------- ಮತ್ತೇ ನೋಡಿದರೆ ಗುರುತಿಸುತ್ತೇನೆಂದು" ಈಗ ಓದಿ ಹೇಳಿದಂತೆ ನಾನೇ ತನಿಖಾಧಿಕಾರಿಯವರ ಮುಂದೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ನಿಪಿ-3 ರಲ್ಲಿರುವ ಪೂರ್ಣ ಸಂಗತಿ ಗೊತ್ತಿದ್ದರೂ ಸಹ ಆರೋಪಿತರು ನಮ್ಮ ಊರಿನವರೇ ಆದ ಕಾರಣ, ಆರೋಪಿತರ ಮಾತನ್ನು ಕೇಳಿಕೊಂಡು ಆರೋಪಿತರಿಗೆ ಸಹಾಯವಾಗಲೀ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಇಲ್ಲ**

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

(ಶುಭಾ)

ಹಿರಿಯ ಸಿವಿಲ್ ನ್ಯಾಯಾಧೀಶರು

ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.